**ಅಧಿಕ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ನ್ಯಾಯಾಲಯ, ಗುಬ್ಬಿ**

**ದಿನಾಂಕಃ 04.08..2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಪಾಟೀ ಸವಾಲುಃ ವಾದಿಗಳ ಪರ ಶ್ರೀ .ಸಿ.ಆರ್.ಬಿ. ವಕೀಲರಿಂದಃ**

9. ನಾನು ಮತ್ತು 2 ನೇ ಪ್ರತಿವಾದಿ ದಾವಾಸ್ವತ್ತಿನ ಸ್ವಾಧೀನದಲ್ಲಿ ಇಲ್ಲದೇ ಇದ್ದರೂ ಸಹ ಅದಕ್ಕೆ ಸಂಬಂದಿಸಿದ ಕಂದಾಯ ದಾಖಲಾತಿಗಳನ್ನು ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ವಾದಿಯ ಮರಣಾನಂತರ ಅವರ ಮಗ ಸಹ ನಮ್ಮ ಜೊತೆ ದಾವಾಸ್ವತ್ತಿನ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. ದಾವಾಸ್ವತ್ತು ವಾದಿಯ ಮಗ ಜಯಣ್ಣರವರ ತಾತನ ಆಸ್ತಿ ಎಂದರೆ ಸರಿ. ಆದ್ದರಿಂದ ಅವರಿಗೆ ದಾವಾಸ್ವತ್ತಿನ ಮೇಲಿರುವ ಭಾಗಾಂಶದ ಹಕ್ಕನ್ನು ಚ್ಯುತಿಗೊಳಿಸಲು ನಾನು ಮತ್ತು 2 ನೇ ಪ್ರತಿವಾದಿ ದಾಖಲಾತಿಗಳನ್ನು ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ದಾವಾಸ್ವತ್ತಿನಲ್ಲಿ ಜಯಣ್ಣರವರಿಗೆಇರುವ ಪಾಲನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಅಧಿಕ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ , ಗುಬ್ಬಿ.**